## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ದಿನಗೂಲಿ ನೌಕರರಿಗೆ ಹೆಚ್ಚುವರಿ ಬಾಕಿ ವೇತನ ಪಾವತಿಸಲು ಕಾರಣರಾದ ಅಧಿಕಾರಿ / ನೌಕರರುಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ - ಆದೇಶ.

ಓದಲಾಗಿದೆ :-1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರ ಪತ್ರ ಸಂಖ್ಯೆ: ಜಿಪಂಚಿ/ಆ2 /ಸಿಬ್ಬಂದಿ/ಸಿ.ಆರ್ 25/2011-12, ದಿನಾಂಕ:18.03.2016 ಮತ್ತು 12.08.2016.

2) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 148 ಕೆಎಸ್ಎಸ್ 2016, ದಿನಾಂಕ: 09.08.2016

3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರ ಪತ್ರ ಸಂಖ್ಯೆ: ಜಿಪಂಚಿ/ಆ2/ಸಿಬ್ಬಂದಿ/ಸಿ.ಆರ್ 96/2009-10, ದಿನಾಂಕ: 03.11.2016

4) ದೋಷಾರೋಪಣಾ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟೀಸ್ ಜಾರಿ ಮಾಡಿದ ಸರ್ಕಾರದ ಪತ್ರ ಸಂಖ್ಯೆ : ಗ್ರಾಅಪ 148 ಕೆಎಸ್ಎಸ್ 2016, ದಿನಾಂಕ : 13.04.2017.

5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರು ಆಪಾದಿತ ಅಧಿಕಾರಿ ನೌಕರರಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಿದ ಪತ್ರ ಸಂಖ್ಯೆ: ಜಿಪಂಚಿ/ಆ2/ಸಿಬ್ಬಂದಿ/ಸಿ.ಆರ್ 96/2009-10, ದಿನಾಂಕ: 22.04.2017

6) ಆಪಾದಿತ ಅಧಿಕಾರಿಗಳಾದ ಶ್ರೀ ಸಿ.ನಿಂಗರಾಜು ಮತ್ತು ಶ್ರೀ ಚಂದ್ರಶೇಖರಯ್ಯ ಇವರ ಮನವಿ ದಿನಾಂಕ:08.05.2017 ಮತ್ತು 26.5.2017

7). ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 148 ಕೆಎಸ್ಎಸ್ 2016, ದಿನಾಂಕ:01.06.2017.

8) ಆಪಾದಿತ ನೌಕರರುಗಳಾದ ಶ್ರೀ ಗಿರೀಶ್ ಮತ್ತು ಶ್ರೀ ಕೆ.ಎಸ್.ನರಸಿಂಹಮೂರ್ತಿ ಇವರುಗಳು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 5.5.2017 ಮತ್ತು 26.7.2017

*******

ಪ್ರಸ್ತಾವನೆ :-

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರು ಮೇಲೆ ಓದಲಾದ ಕ್ರಮಾಂಕ (1) ದಿನಾಂಕ:18.03.2016 ರ ಪತ್ರದಲ್ಲಿ ಚಿಕ್ಕಮಗಳೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ದಿನಗೂಲಿ, ಗುತ್ತಿಗೆ, ಅರೆ ಕಾಲಿಕ ಮತ್ತು ಸ್ವೈಪಂಡರಿ ನೌಕರರನ್ನು ತಾತ್ಕಾಲಿಕ ಆಧಾರದ ಮೇಲೆ ಸಲ್ಲಿಸಿರುವ ಸೇವೆಯನ್ನು ಅರ್ಹತಾದಾಯಕ ಎಂದು ಪರಿಗಣಿಸಿ, ಸೇವೆಯಲ್ಲಿ ಸಕ್ರಮಗೊಳಿಸಿರುವುದಾಗಿ ಹಾಗೂ ಸದರಿಯವರುಗಳು ಸೇವೆಗೆ ಸೇರಿದ ದಿನಾಂಕದಿಂದ 10 ವರ್ಷಗಳನ್ನು ಪೂರೈಸಿದ ದಿನಾಂಕವನ್ನು ಪರಿಗಣಿಸಿ ಕಾಲಕಾಲಕ್ಕೆ ಕಾಲಮಿತಿ ಮುಂಬಡ್ತಿ, 15 ವರ್ಷಗಳ ಸ್ವಯಂಚಾಲಿತ ಮುಂಬಡ್ತಿ, 20 ವರ್ಷಗಳ ಹೆಚ್ಚುವರಿ ವೇತನ ಬಡ್ತಿಗಳನ್ನು ಮಂಜೂರು ಮಾಡಿ ಬಾಕಿ ವೇತನ ಪಾವತಿಸಿ ರೂ.21.87 ಲಕ್ಷ ಆರ್ಥಿಕ ನಷ್ಟ ಉಂಟು ಮಾಡಿರುವುದಕ್ಕೆ ಮಹಾಲೇಖಪಾಲರ ಆಡಿಟ್ ಆಕ್ಷೇಪಣೆಯಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಸದರಿ ಆಕ್ಷೇಪಣೆಗೆ ಸಂಬಂಧಿಸಿದಂತೆ ಪರಿಶೀಲಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ:(2) ದಿನಾಂಕ: 09-08-2016 ರಲ್ಲಿ ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಮೂರನೇ ವರದಿ (2013-14) ರಲ್ಲಿನ ಕಂಡಿಕೆ ಸಂಖ್ಯೆ: 2.09/2008-09ಕ್ಕೆ ಸಂಬಂಧಿಸಿದಂತೆ ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಹಿಂದಿನ ಜಿಲ್ಲಾ ಗ್ರಾಮೀಣಾಭಿವೃದ್ಧಿ ಸಂಸ್ಥೆ ಮತ್ತು ತಾಲ್ಲೂಕು ಅಭಿವೃದ್ಧಿ ಮಂಡಳಿಗಳಲ್ಲಿ ದಿನಗೂಲಿ / ಸಂಚಿತ ವೇತನದ ಮೇಲೆ ಸೇವೆ ಸಲ್ಲಿಸಿದ ಸಿಬ್ಬಂದಿಗಳಿಗೆ ಸರ್ಕಾರದ ನಿಯಮಾವಳಿಗಳನ್ನು ಉಲ್ಲಂಘಿಸಿ ಬಾಕಿ ವೇತನಗಳನ್ನು ಹೆಚ್ಚುವರಿಯಾಗಿ ಪಾವತಿಸಲು ಕಾರಣರಾಗಿರುವ ಅಧಿಕಾರಿ / ನೌಕರರುಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲು ತೀರ್ಮಾನಿಸಿ, ಈ ಅವಧಿಯಲ್ಲಿ ಬಾಕಿ ವೇತನ ಪಾವತಿ ಮಾಡಿದ ಅಧಿಕಾರಿ/ನೌಕರುಗಳ ಹೆಸರುಗಳನ್ನು ಗುರುತಿಸಿ ಕರಡು ದೋಷಾರೋಪ ಪಟ್ಟಿಯನ್ನು ತಯಾರಿಸಿ ಕಳುಹಿಸಲು ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಜಿಲ್ಲಾ ಪಂಚಾಯತ್ ಚಿಕ್ಕಮಗಳೂರು ಇವರಿಗೆ ಅರೆ ಸರ್ಕಾರಿ ಪತ್ರ ಬರೆಯಲಾಗಿದೆ.

..2..

ಮೇಲೆ ಓದಲಾದ ಕ್ರಮ ಸಂಖ್ಯೆ: (3)ರ ಪತ್ರ ದಿನಾಂಕ:3.11.2016ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರು ಪ್ರಕರಣದಲ್ಲಿ ಭಾಗಿಯಾಗಿರುವ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಕರಡು ದೋಷಾರೋಪಣೆ ಪಟ್ಟಿ (ಅನುಬಂಧ 1 ರಿಂದ 4)ಯನ್ನು ಹಾಗೂ ದೃಢೀಕೃತ ಅಗತ್ಯ ದಾಖಲೆಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದರು.

1) ಶ್ರೀ ನಿಂಗರಾಜು, ಹಿಂದಿನ ಉಪ ಕಾರ್ಯದರ್ಶಿ(ಆಡಳಿತ) (ನಿವೃತ್ತ)
2) ಶ್ರೀ ಚಂದ್ರಶೇಖರಯ್ಯ, ಹಿಂದಿನ ಸಹಾಯಕ ಕಾರ್ಯದರ್ಶಿ (ನಿವೃತ್ತ)
3) ಶ್ರೀ ಎಂ.ಎಸ್.ಗಿರೀಶ್, ವ್ಯವಸ್ಥಾಪಕರು, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.
4) ಶ್ರೀ ಕೆ.ಎಸ್.ನರಸಿಂಹಮೂರ್ತಿ, ಪ್ರಥಮ ದರ್ಜೆ ಸಹಾಯಕ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು

ಮೇಲೆ ಓದಲಾದ ಕ್ರಮಾಂಕ (4), ದಿನಾಂಕ::13.04.2017 ರ ಸರ್ಕಾರದ ಪತ್ರದಲ್ಲಿ ಕಾರಣ ಕೇಳುವ ನೋಟೀಸ್‌ನೊಂದಿಗೆ ದೋಷಾರೋಪಣೆ ಪಟ್ಟಿ(ಅನುಬಂಧ-1 ರಿಂದ 4)ಯನ್ನು ಆರೋಪಿತ ಅಧಿಕಾರಿ / ನೌಕರರುಗಳಿಗೆ ಜಾರಿ ಮಾಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ರವರಿಗೆ ತಿಳಿಸಲಾಗಿತ್ತು.

ಅದರಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ರವರ ಮೇಲೆ ಓದಲಾದ ಕ್ರಮಾಂಕ (5) ದಿನಾಂಕ: 22.04.2017ರ ಪತ್ರದ ಮೂಲಕ ಆಪಾದಿತ ಅಧಿಕಾರಿ / ನೌಕರರುಗಳಿಗೆ ಸರ್ಕಾರದ ದಿನಾಂಕ:13.04.2017ರ ಪತ್ರದೊಂದಿಗೆ ಕಳುಹಿಸಲಾದ ಕಾರಣ ಕೇಳುವ ನೋಟೀಸ್ {(ದೋಷಾರೋಪಣಾ ಪಟ್ಟಿ(ಅನುಬಂಧ 1 ರಿಂದ 4)}ಯನ್ನು ಜಾರಿ ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (6) ದಿನಾಂಕ:8.5.2017 ಮತ್ತು 26.05.2017 ರ ಪತ್ರಗಳಲ್ಲಿ ಸರ್ಕಾರದ ಕಾರಣ ಕೇಳುವ ನೋಟೀಸ್{ದೋಷಾರೋಪಣೆ ಪಟ್ಟಿ (ಅನುಬಂಧ-1 ರಿಂದ 4)} ಗೆ ಆಪಾದಿತ ಅಧಿಕಾರಿಗಳ ಪೈಕಿ ಶ್ರೀ ನಿಂಗರಾಜು, ನಿವೃತ್ತ ಉಪ ಕಾರ್ಯದರ್ಶಿ ಹಾಗೂ ಶ್ರೀ ಚಂದ್ರಶೇಖರಯ್ಯ ಹಿಂದಿನ ಸಹಾಯಕ ಕಾರ್ಯದರ್ಶಿ (ನಿವೃತ್ತ) ಇವರುಗಳು ಲಿಖಿತ ಹೇಳಿಕೆ ಸಲ್ಲಿಸಲು ಕಾಲಾವಕಾಶವನ್ನು ನೀಡುವಂತೆ ಕೋರಿದ್ದರ ಮೇರೆಗೆ ಮೇಲೆ ಓದಲಾದ ಕ್ರಮಾಂಕ (7) ದಿನಾಂಕ:01.06.2017ರ ಪತ್ರದಲ್ಲಿ 15 ದಿನಗಳ ಕಾಲಾವಕಾಶವನ್ನು ನೀಡಿ ಸದರಿಯವರುಗಳು ಕೋರಿದ ದಾಖಲಾತಿಗಳನ್ನು ಒದಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ರವರಿಗೆ ತಿಳಿಸಲಾಗಿತ್ತು.

ಮೇಲೆ ಓದಲಾದ ಕ್ರಮಾಂಕ (8) ದಿನಾಂಕ:8.5.2017 ಮತ್ತು 26.07.2017ರ ಪತ್ರಗಳಲ್ಲಿ ಆಪಾದಿತ ನೌಕರರುಗಳ ಪೈಕಿ ಶ್ರೀ ಎಂ.ಎಸ್.ಗಿರೀಶ್, ವ್ಯವಸ್ಥಾಪಕರು ಮತ್ತು ಶ್ರೀ ಕೆ.ಎಸ್. ನರಸಿಂಹಮೂರ್ತಿ, ಪ್ರಥಮ ದರ್ಜೆ ಸಹಾಯಕ ಇವರುಗಳು ತಮ್ಮ ಲಿಖಿತ ಹೇಳಿಕೆಗಳನ್ನು ಸಲ್ಲಿಸಿರುತ್ತಾರೆ. ಸದರಿಯವರುಗಳ ಹೇಳಿಕೆಗಳನ್ನು ಪರಿಶೀಲಿಸಲಾಗಿ ಸದರಿ ಹೇಳಿಕೆಯಲ್ಲಿ ಒಪ್ಪಬಹುದಾದಂತಹ ಅಂಶಗಳು ಕಂಡುಬರುವುದಿಲ್ಲ.

ಮುಂದುವರೆದು ಪ್ರಕರಣದಲ್ಲಿ ಭಾಗಿಯಾಗಿದ್ದ ಇತರೆ ಆಪಾದಿತರುಗಳ ಪೈಕಿ ಶ್ರೀ ನಿಂಗರಾಜು, ಹಿಂದಿನ ಉಪ ಕಾರ್ಯದರ್ಶಿ(ಪ್ರಸ್ತುತ ನಿವೃತ್ತ) ಹಾಗೂ ಶ್ರೀ ಚಂದ್ರಶೇಖರಯ್ಯ ಹಿಂದಿನ ಸಹಾಯಕ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ) ಇವರುಗಳಿಗೆ ಲಿಖಿತ ಹೇಳಿಕೆ ಸಲ್ಲಿಸಲು 15 ದಿನಗಳ ಕಾಲಾವಕಾಶ ನೀಡಿ, ಒಂದು ವರ್ಷ ಗತಿಸಿದ್ದರೂ ಸಹ ಈ ವರೆಗೆ ಲಿಖಿತ ಹೇಳಿಕೆ ಸಲ್ಲಿಸುವಲ್ಲಿ ವಿಫಲರಾಗಿರುತ್ತಾರೆ. ಆದ್ದರಿಂದ ಸದರಿಯವರ ಲಿಖಿತ ಹೇಳಿಕೆ ಏನೂ ಇಲ್ಲವೆಂದು ಭಾವಿಸಿ, ಪ್ರಕರಣದಲ್ಲಿ ಭಾಗಿಯಾಗಿರುವ ಎಲ್ಲಾ ಆಪಾದಿತರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 148 ಕೆಎಸ್ಎಸ್ 2016**
**ಬೆಂಗಳೂರು, ದಿನಾಂಕ: 07.09.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದ್ದರು ಎನ್ನಲಾದ ಕರ್ತವ್ಯಲೋಪ, ದುರ್ನಡತೆ, ಹಾಗೂ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವ ಈ ಕೆಳಕಂಡ ಅಧಿಕಾರಿ / ನೌಕರರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರನ್ವಯ ಹಾಗೂ ನಿಯಮ 11(2) ರನ್ವಯ ಶ್ರೀ ಬಸವನಹಳ್ಳಿ ವೆಂಕಟಕೃಷ್ಣಯ್ಯ

ಪ್ರಕಾಶ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ಇಲಾಖಾ ವಿಚಾರಣಾಧಿಕಾರಿಯನ್ನಾಗಿ ಹಾಗೂ ಇದೇ ನಿಯಮದ ಉಪ ನಿಯಮ 11(5)ರಡಿ ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

1) ಶ್ರೀ ನಿಂಗರಾಜು, ಹಿಂದಿನ ಉಪ ಕಾರ್ಯದರ್ಶಿ(ಆಡಳಿತ) (ನಿವೃತ್ತ)
2) ಶ್ರೀ ಚಂದ್ರಶೇಖರಯ್ಯ, ಹಿಂದಿನ ಸಹಾಯಕ ಕಾರ್ಯದರ್ಶಿ (ನಿವೃತ್ತ)
3) ಶ್ರೀ ಎಂ.ಎಸ್.ಗಿರೀಶ್, ವ್ಯವಸ್ಥಾಪಕರು, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.
4) ಶ್ರೀ ಕೆ.ಎಸ್.ನರಸಿಂಹಮೂರ್ತಿ, ಪ್ರಥಮ ದರ್ಜೆ ಸಹಾಯಕ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.

ವಿಚಾರಣಾಧಿಕಾರಿಗಳು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

NOA 7/9/2014

ಇವರಿಗೆ :-

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಚಿಕ್ಕಮಗಳೂರು.
4) ಶ್ರೀ ಬಸವನಹಳ್ಳಿ ವೆಂಕಟಕೃಷ್ಣಯ್ಯ ಪ್ರಕಾಶ್ (ಬಿ.ವಿ.ಪ್ರಕಾಶ್), ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮನೆ ನಂ.01, 09/02, ಓಂ ಅಪಾರ್ಟ್‌ಮೆಂಟ್, 3ನೇ ಮುಖ್ಯರಸ್ತೆ, 17ನೇ ಉಪ (ಅಡ್ಡ) ರಸ್ತೆ, ಮಾರ್ಗೋಸ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5) ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು – ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆಯನ್ನು ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
6) ಶ್ರೀ ನಿಂಗರಾಜು, ಹಿಂದಿನ ಉಪ ಕಾರ್ಯದರ್ಶಿ(ಆಡಳಿತ) (ನಿವೃತ್ತ)
7) ಶ್ರೀ ಚಂದ್ರಶೇಖರಯ್ಯ, ಹಿಂದಿನ ಸಹಾಯಕ ಕಾರ್ಯದರ್ಶಿ (ನಿವೃತ್ತ)
8) ಶ್ರೀ ಎಂ.ಎಸ್.ಗಿರೀಶ್, ವ್ಯವಸ್ಥಾಪಕರು,
9) ಶ್ರೀ ಕೆ.ಎಸ್.ನರಸಿಂಹಮೂರ್ತಿ, ಪ್ರಥಮ ದರ್ಜೆ ಸಹಾಯಕ

} ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಮೂಲಕ.

10) ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಶಾಖೆಗೆ.
11) ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಶಾಖೆಗೆ.
12) ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
13) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.